# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 26.06.2019**

## *ಮಹದೇವಪುರ ವಲಯದಲ್ಲಿ ಪಾದಚಾರಿ ರಸ್ತೆ ಒತ್ತುವರಿ ತೆರವು ಕಾರ್ಯಾಚರಣೆ ಕುರಿತು.*

ಸನ್ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಬೆಂಗಳೂರ ಅಭಿವೃದ್ಧಿ ಸಚಿವರು ಮತ್ತು ಮಾನ್ಯ ಪಾಲಿಕೆ ಆಯುಕ್ತರು ರವರ ಸೂಚನೆಯ ಮೇರೆಗೆ ದಿನಾಂಕ:26-06-2019ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯದ ವಾರ್ಡ್ ಅಭಿಯಂತರರ ನೇತೃತ್ವದಲ್ಲಿ ಐಟಿಪಿಎಲ್ ಹಿಂಭಾಗ ಗೇಟ್ ನಂ-3, ಪಟ್ಟಂದೂರು, ಅಗ್ರಹಾರ ಮುಖ್ಯ ರಸ್ತೆಯಲ್ಲಿ ಬರುವ ಸಂಪರ್ಕ ರಸ್ತೆಗಳಲ್ಲಿ ಸುಮಾರು 1.50 ಕೀ.ಮೀ ಉದ್ದದ ರಸ್ತೆಯ ಎರಡು ಬದಿಗಳಲ್ಲಿ ಪಾದಚಾರಿ ರಸ್ತೆ ಒತ್ತುವರಿ ಮಾಡಿಕೊಂಡು ವ್ಯಾಪಾರ ಮಾಡುತ್ತಿದ್ದಂತಹ ಅಂಗಡಿಗಳ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಹಮ್ಮಿಕೊಂಡು, ಒಟ್ಟು-40 ತಾತ್ಕಾಲಿಕ ಪಾದಚಾರಿ ರಸ್ತೆ ಒತ್ತುವರಿಗಳನ್ನು ತೆರವುಗೊಳಿಸಲಾಗಿದೆ ಹಾಗೂ ಸದರಿ ಕಾರ್ಯಾಚರಣೆಯನ್ನು ಮುಂದಿನ ದಿನಗಳಲ್ಲಿ ಇತರೆ ವಾರ್ಡ್‌ಗಳಲ್ಲಿಯೂ ಸಹ ಹಮ್ಮಿಕೊಳ್ಳಲಾಗುವುದೆಂದು ಮಹದೇವಪುರ ವಲಯದ ಮುಖ್ಯ ಅಭಿಯಂತರರಾದ ಶ್ರೀ ಆರ್.ಎಲ್.ಪರಮೇಶ್ವರಯ್ಯ ರವರು ತಿಳಿಸಿದ್ದಾರೆ.

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:**


- *ಶ್ರೀ ಆರ್.ಎಲ್.ಪರಮೇಶ್ವರಯ್ಯ, ಮುಖ್ಯ ಅಭಿಯಂತರರು (ಮಹದೇವಪುರ)*
  *ಮೊಬೈಲ್ ಸಂಖ್ಯೆ: 9480683181*


**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**





